ಅ) ಹೌದು

ಆ) ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ದೊರೆತು ಹಣ ಹಂಚಿಕೆಯಾದ ನಂತರ ಪ್ರಾರಂಭಿಸಲಾಗುವುದು.

ಇ) ನಿರ್ಮಾಣ ಕಾರ್ಯ ಪ್ರಾರಂಭವಾಗದೇ ಇರುವ ಕಾರಣ ನಿರ್ಮಾಣ ಕಾರ್ಯ ಪೂರ್ಣವಾಗುವ ಅವಧಿಯನ್ನು ಸೂಚಿಸುವುದು ಕಷ್ಟವಾಗುತ್ತದೆ.

ಪ್ರಥಮ ದರ್ಜೆ ಮಹಾವಿದ್ಯಾಲಯಗಳು.

2538 - ಶ್ರೀ ಬಸನಗೌಡ ಪಾಟೀಲ್ (ವಿಜಾಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಬರುವ ಪ್ರಥಮ ದರ್ಜೆ ಮಹಾವಿದ್ಯಾಲಯಗಳಿಗೆ ಸಿಬ್ಬಂದಿ ವರ್ಗಕ್ಕೆ ಈ ವರೆಗೆ ಕೊಡಬೇಕಾದ ತುಟ್ಟಿ ಭತ್ಯೆ ಬಾಕಿ ಎಷ್ಟು?*

ಆ) *ಅದನ್ನು ಯಾವಾಗ ಕೊಡಲಾಗುವುದು ರಾಜ್ಯದ ಉಳಿದ ಭಾಗದಲ್ಲಿ ಕೊಟ್ಟರೂ ಸದರಿ ವಿಶ್ವವಿದ್ಯಾಲಯಕ್ಕೆಯೇ ಕೊಡದೆ ಇರುವುದರ ಉದ್ದೇಶವೇನು?*

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ರೂ. 5.04 ಕೋಟಿ

ಆ) ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಸರ್ಕಾರ ಪರಿಶೀಲಿಸುತ್ತಿದೆ. (ವಿಶ್ವವಿದ್ಯಾನಿಲಯಕ್ಕಲ್ಲ, ಸಂಬಂಧಪಟ್ಟ ಪ್ರಾಧಿಕಾರಗಳಿಗೆ)

ವಿಜಾಪುರ ನಗರದಲ್ಲಿ ಆಯುರ್ವೇದ ಆಸ್ಪತ್ರೆ ನಿರ್ಮಾಣ.

2410 - ಶ್ರೀ ಬಸನಗೌಡ ಪಾಟೀಲ್ (ವಿಜಾಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ವಿಜಾಪುರ ನಗರದಲ್ಲಿರುವ ಆಯುರ್ವೇದ ಆಸ್ಪತ್ರೆಯಲ್ಲಿ ನಿರ್ಮಿಸಲಾಗುತ್ತಿರುವ ಕಟ್ಟಡವನ್ನು ಅರ್ಧಕ್ಕೆ ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಲ್ಲಿ ಅರ್ಧಕ್ಕೆ ನಿಲ್ಲಿಸಲು ಕಾರಣಗಳೇನು?*

ಇ) *ಕಟ್ಟಡವನ್ನು ಶೀಘ್ರವಾಗಿ ಮುಗಿಸಿ ರೋಗಿಗಳಿಗೆ ಅನುಕೂಲ ಮಾಡಿಕೊಡುವ ವಿಚಾರ ಸರ್ಕಾರಕ್ಕಿದೆಯೇ?*

ಡಾ|| ಎಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು:

ಅ) ಹೌದು.

ಆ) ಲೋಕೋಪಯೋಗಿ ಇಲಾಖೆಯ ಮತಿಯಿಂದ ಕೈಗೆತ್ತಿಕೊಳ್ಳಲಾಗಿದ್ದ ಕಟ್ಟಡದ ಕಾರ್ಯವನ್ನು ಟೆಂಡರ್ ಮೂಲಕ ನಿರ್ವಹಿಸಲು ಉದ್ದೇಶಿಸಲಾಗಿದೆ ಮತ್ತು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ಇ) ಕಟ್ಟಡವನ್ನು ಶೀಘ್ರವಾಗಿ ಮುಗಿಸುವ ಉದ್ದೇಶದಿಂದ ಕಟ್ಟಡದ ನಿರ್ಮಾಣ ಕಾರ್ಯವನ್ನು ಲೋಕೋಪಯೋಗಿ ಇಲಾಖೆಯಿಂದ ಹಿಂದಕ್ಕೆ ಪಡೆದು ಟೆಂಡರ್ ಮೂಲಕ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

ಮಾಗಡಿ ತಾಲ್ಲೂಕಿನ ಸಾವನದುರ್ಗ ಅರಣ್ಯದಲ್ಲಿ ಗಿರಿಧಾಮ ನಿರ್ಮಾಣ

2366 - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನ, ಸಾವನದುರ್ಗ ಅರಣ್ಯವು ಇಡೀ ರಾಜ್ಯದಲ್ಲಿಯೇ ಗಮನ ಸೆಳೆಯುವ ಅರಣ್ಯವಾಗಿದ್ದು ಈ ಅರಣ್ಯದಲ್ಲಿ ಗಿರಿಧಾಮವನ್ನು ಸ್ಥಾಪಿಸಲಾಗಿದೆಯೇ?

ಆ) ಪ್ರತಿದಿನ ರಾಜ್ಯದ ಹಲವೆಡೆಗಳಿಂದ ಪ್ರವಾಸಿಗರು ಬರುತ್ತಿರುವುದರಿಂದ ಇಲ್ಲಿ ಒಂದು ಬೃಹತ್ ಪ್ರವಾಸಿ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಮುಂದಾಗುವುದೇ?

ಇ) ಈ ಬೃಹತ್ ಅರಣ್ಯ ಪ್ರದೇಶದಲ್ಲಿ ಆಗಾಗ್ಗೆ ಬೆಲೆಬಾಳುವ ಮರಗಳ ಸಾಗಣೆಕೆಯನ್ನು ತಪ್ಪಿಸಲು ಹಾಗೂ ಕಾಡಮೃಗಗಳ ರಕ್ಷಣೆ ಕೊಡಲು ಅರಣ್ಯದ ಸುತ್ತಲೂ ತಂತಿ ಬೇಲಿಯನ್ನು ನಿರ್ಮಿಸಲು ತಗಲುವ ವೆಚ್ಚ ಎಷ್ಟೆಂದು ಅಂದಾಜಿಸಲಾಗಿದೆಯೇ ಹಾಗೂ ತಂತಿ ಬೇಲಿ ಹಾಕಿಸಲು ಸರ್ಕಾರ ಶೀಘ್ರ ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್.ವೈ. ಮೇಟಿ (ಅರಣ್ಯ ಸಚಿವರು) :

ಅ) ಹೌದು.

ಆ) ಹೌದು. ಪ್ರವಾಸಿಗರ ಆಕರ್ಷಣೆ ಮತ್ತು ಅನುಕೂಲಕ್ಕೆ ಜಿಂಕೆ ವನ ಮೊಸಳೆ ಹೊಂಡ ನವಿಲು ಅವರಣ, ಪ್ಯಾರಾಗೋಲ ಮತ್ತು ಒಂದು ಕಾಟೇಜನ್ನು ನಿರ್ಮಿಸಲಾಗಿದೆ.

ಇ) ಸಾವನದುರ್ಗ ಅರಣ್ಯ ಪ್ರದೇಶವು ಒಟ್ಟು 6780 ಎಕರೆ ವಿಸ್ತೀರ್ಣವುಳ್ಳದಾಗಿದ್ದು, 1995-96ನೇ ಸಾಲಿಗೆ ಕೆಂಪೇಗೌಡ ವನಧಾಮ ಪ್ರದೇಶದಲ್ಲಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲು 3.65 ಲಕ್ಷ ರೂ.ಗಳನ್ನು ಒದಗಿಸಲಾಗಿದೆ. ಹಾಗೂ ಸುಮಾರು 138 ಲಕ್ಷ ರೂ.ಗಳ ಕ್ರಿಯಾ ಯೋಜನೆ ತಯಾರಿಸಿದ್ದು, ಹಂತ ಹಂತವಾಗಿ ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ. ಅರಣ್ಯ ಪ್ರದೇಶದ ರಕ್ಷಣೆಗೆ ಅವಶ್ಯಕವಾದ ತಂತಿ ಬೇಲಿ ನಿರ್ಮಾಣ ಕಾರ್ಯವನ್ನು ಸಹ ಈ ಯೋಜನೆಯಲ್ಲಿ ಅಳವಡಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಮಾಗಡಿ ಟೌನಿನ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ.

2370 - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ಟೌನಿನ ಜನರಲ್ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲಾಗಿದೆಯೇ?

ಆ) ಜನರಲ್ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿದರೆ ಇರಬೇಕಾದ ಸೌಲಭ್ಯ ಮತ್ತು ಸೌಲಭ್ಯಗಳಾವುವು?

ಇ) ಈಗ ಮಾಗಡಿ ಪಟ್ಟಣದ ಆಸ್ಪತ್ರೆಗೆ ಈ ಎಲ್ಲಾ ಸೌಲಭ್ಯಗಳನ್ನು ಪೂರೈಸಲಾಗಿದೆಯೇ?

ಈ) ಮೇಲ್ದರ್ಜೆಗೇರಿಸದಿದ್ದರೆ ಮಾಗಡಿ ಟೌನ್ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಶೀಘ್ರ ಕ್ರಮ ಕೈಗೊಳ್ಳಲಾಗುವುದೇ?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಮಾಗಡಿ ಟೌನಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸರ್ಕಾರದ ಆದೇಶ ಸಂಖ್ಯೆ : ಆಕುಕ 480 ಸಿಜಿಎಂ 80, ದಿನಾಂಕ : 27-3-81ರ ಆದೇಶದಲ್ಲಿ 30 ಹಾಸಿಗೆಗಳ ಸಾರ್ವಜನಿಕ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಯಿತು.

ಆ) 30 ಹಾಸಿಗೆಗಳ ಸಾರ್ವಜನಿಕ ಆಸ್ಪತ್ರೆ ಕಟ್ಟಡ ಪೂರ್ಣಗೊಂಡಿದ್ದು, ಈ ಆಸ್ಪತ್ರೆಗೆ ಹೆಚ್ಚುವರಿ ಮಂಜೂರಾತಿಗಾಗಿ ಪ್ರಸ್ತಾವನೆ ಸಲ್ಲಿಸಿದೆ.